ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ಲೋಕೋಪಯೋಗಿ ಪ್ರವಾಸಿ ಮಂದಿರದ ಅಕ್ರಮ ಕಾಂಪೌಂಡ್ ನಿರ್ಮಾಣದ ಬಗ್ಗೆ

ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-

1176(1326) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ಜಿಲ್ಲೆಯ ಔರಾದ್ (ಬಾ) ತಾಲ್ಲೂಕು ಪಟ್ಟಣದಲ್ಲಿ ಲೋಕೋಪಯೋಗಿ ಪ್ರವಾಸಿ ಮಂದಿರವು ಅಸ್ತಿತ್ವದಲ್ಲಿದೆಯೇ ; ಇದ್ದಲ್ಲಿ, ಯಾವ ದಿನಾಂಕದಂದು ಯಾವ ಸರ್ವೆ ನಂಬರ್‌ನಲ್ಲಿ ಕಟ್ಟಡವನ್ನು ನಿರ್ಮಿಸಲಾಗಿದೆ ;

(ಆ) ಸದರಿ ಕಟ್ಟಡವನ್ನು ನಿರ್ಮಿಸಲು ಯಾರಿಂದ ಮತ್ತು ಯಾವ ದಿನಾಂಕದಂದು ಎಷ್ಟು ವಿಸ್ತೀರ್ಣದ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ ಮತ್ತು ಜಮೀನಿಗೆ ಪಾವತಿಸಿರುವ ಹಣವೆಷ್ಟು ;

(ಇ) ಪ್ರವಾಸಿ ಮಂದಿರದ ಸುತ್ತಲೂ ಕಾಂಪೌಂಡ್ ನಿರ್ಮಿಸಿರುವುದು ನಿಜವೇ; ಇದ್ದಲ್ಲಿ, ಎಷ್ಟು ವಿಸ್ತೀರ್ಣದ ಜಮೀನಿನಲ್ಲಿ ನಿರ್ಮಿಸಲಾಗಿದೆ; ಈ ಭೂಮಿಯನ್ನು ಸ್ವಾಧೀನಪಡಿಸಿ ಕೊಳ್ಳಲಾಗಿದೆಯೇ ; ಇದ್ದಲ್ಲಿ, ಯಾವ ದಿನಾಂಕದಂದು ಎಷ್ಟು ಹಣ ಪಾವತಿಸಿ ಸ್ವಾಧೀನಪಡಿಸಿಕೊಳ್ಳಲಾಗಿದೆ ; ಇಲ್ಲದಿದ್ದಲ್ಲಿ, ಈ ಜಾಗದ ಮಾಲೀಕರು ಯಾರು ;

(ಈ) ಸದರಿ ಜಾಗದ ಮಾಲೀಕತ್ವಕ್ಕೆ ಸಂಬಂಧಪಟ್ಟಂತೆ ಸರ್ವೆ ಅಥವಾ ಜಂಟಿ ಸರ್ವೆ ಕಾರ್ಯ ನಡೆಸಲಾಗಿದೆಯೇ ; ಇದ್ದಲ್ಲಿ ವರದಿಯ ಪ್ರತಿ ನೀಡುವುದು ;

(ಉ) ಸದರಿ ಜಾಗವನ್ನು ಕಾನೂನು ಪ್ರಕಾರ ಸ್ವಾಧೀನಪಡಿಸಿಕೊಳ್ಳದೇ ಕಾಂಪೌಂಡ್ ನಿರ್ಮಿಸಲಾಗಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣರಾದ ಅಧಿಕಾರಿ / ನೌಕರರ ವಿರುದ್ಧ ಕೈಗೊಂಡಿರುವ ಅಥವಾ ಕೈಗೊಳ್ಳುವ ಕ್ರಮಗಳೇನು ;

(ಊ) ಅಕ್ರಮವಾಗಿ ಕಾಂಪೌಂಡ್ ನಿರ್ಮಿಸಿದ್ದಲ್ಲಿ ಸದರಿ ಜಾಗವನ್ನು ಮಾಲೀಕರಿಗೆ ಹಿಂದಿರುಗಿಸಲು ಈವರೆಗೂ ಕೈಗೊಂಡ ಕ್ರಮಗಳೇನು ; ಇಲ್ಲದಿದ್ದಲ್ಲಿ, ಮುಂದಾದರೂ ಜಮೀನನ್ನು ಹಿಂದಿರುಗಿಸಲು ಕ್ರಮ ಕೈಗೊಂಡು ಮಾಲೀಕರಿಗೆ ನ್ಯಾಯ ಒದಗಿಸಲಾಗುವುದೇ ? (ವಿವರ ನೀಡುವುದು)